ಶ್ರೀ ಎಂ.ಪಿ. ಪ್ರಕಾಶ್ (ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳ ಸಚಿವರು) ಗೃಹ : ಮಾನ್ಯ ಅಧ್ಯಕ್ಷರೆ, ಈಗಾಗಲೇ ಸನ್ಮಾನ್ಯ ಮುಖ್ಯ ಮಂತ್ರಿಗಳು ಸ್ಪಷ್ಟಪಡಿಸಿದ್ದಾರೆ. ಅವರು ಕೂಡ ಹಿಂದಿನ ಅಧಿವೇಶನದಲ್ಲಿ ಕಾನೂನಿಗೆ ಅನುಗುಣವಾಗಿ ಸರ್ಕಾರಿ ಕಛೇರಿಗಳಲ್ಲಿ ರಾಷ್ಟ್ರಧ್ವಜವನ್ನು ಹಾಕಬೇಕಾಗುತ್ತದೆ. ಅದನ್ನು ಕಾಪಾಡಿಕೊಳ್ಳಬೇಕಾದುದು ನಮ್ಮ ಆದ್ಯ ಕರ್ತವ್ಯ. ಈಗ ಬೇರೆ ವಿಚಾರ, ಮಾನ್ಯ ಬೆಳಗಾವಿ ಶಾಸಕರುಗಳು ಹೇಳಿದ ರೀತಿಯಲ್ಲಿ ಸಂಬಂಧಪಟ್ಟ ಕಟ್ಟಡದ ಮೇಲೆ ಇರುವ ಧ್ವಜದ ಬಗ್ಗೆ ಕ್ರಮ ಕೈಗೊಳ್ಳುತ್ತೇವೆ. ರಾಷ್ಟ್ರಧ್ವಜಕ್ಕೆ ಅವಕಾಶವನ್ನು ಮಾತ್ರ ಕಲ್ಪಿಸಿಕೊಡುತ್ತೇವೆ.

ಶ್ರೀ ಎಂ.ಕೆ. ಸೋಮಶೇಖರ್ : ಸರ್. ಅಜೆಂಡಾ ಪ್ರಕಾರ ಮುಂದಿನ ವಿಷಯವನ್ನು ತೆಗೆದುಕೊಳ್ಳಿ.

ಅಧ್ಯಕ್ಷರು : ದಯಮಾಡಿ ಎಲ್ಲರೂ ಕುಳಿತುಕೊಳ್ಳಿ. ಈಗ ಮಾನ್ಯ ವಿರೋಧ ಪಕ್ಷದ ನಾಯಕರಾದ ಧರ್ಮಸಿಂಗ್‌ರವರು ಪ್ರಸ್ತಾಪ ಮಾಡಿರುವ ಬಗ್ಗೆ ಎಲ್ಲಾ ಕೇಳಿದ್ದೇನೆ. ದಯಮಾಡಿ ಕುಳಿತುಕೊಳ್ಳಿ. ನಿಮಗೆ ಎಷ್ಟು ಸಾರಿ ಹೇಳುವುದು.

ಶ್ರೀ ಎನ್. ಧರ್ಮಸಿಂಗ್ (ವಿರೋಧ ಪಕ್ಷದ ನಾಯಕರು) : ಮಾನ್ಯ ಅಧ್ಯಕ್ಷರೆ, ತಾವು ತೀರ್ಪು ಕೊಡುವುದಕ್ಕೆ ಮುಂಚೆ, ಈಗ ರಾಜ್ಯಪಾಲರು ಬರೆದಂಥ ಪತ್ರ ಪತ್ರಿಕೆಯಲ್ಲಿ ಬಂದಿದೆ.

ಒಬ್ಬ ಮಾನ್ಯ ಸದಸ್ಯರು : ಹೇಳಿದ್ದನ್ನೇ ಹೇಳುತ್ತಿದ್ದಾರೆ.

(ಅಡಚಣೆ)

2. ಘನತೆವೆತ್ತ ರಾಜ್ಯಪಾಲರು ಬರೆದಿರುವ ಪತ್ರದ ಬಗ್ಗೆ ಚರ್ಚೆಗೆ ಅವಕಾಶ ಕೋರಿಕೆ. (ಮುಂದುವರಿದ ಚರ್ಚೆ)

ಶ್ರೀ ಎನ್. ಧರ್ಮಸಿಂಗ್ (ವಿರೋಧ ಪಕ್ಷದ ನಾಯಕರು) : ಯಾವಾಗ ರಾಜ್ಯಪಾಲರು ಸರ್ಕಾರಕ್ಕೆ ಬಹಿರಂಗವಾಗಿ ಪತ್ರದಲ್ಲಿ ಪ್ರಕಟ ಮಾಡಿದ್ದಾರೆ. ನಾವು ಸದನದಲ್ಲಿ ಅದರ ಬಗ್ಗೆ ಚರ್ಚೆಯನ್ನು ಮಾಡುವುದಕ್ಕೆ ಕೇಳಿದ್ದೇವೆ. ಇವತ್ತು ಸಭಾನಾಯಕರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾರೆ. ನಾನು ಏತಕ್ಕಾಗಿ ಈ ಮಾತನ್ನು ಹೇಳುತ್ತಿದ್ದೇನೆಂದರೆ, ಕೆಲವು ಕ್ರಿಯಾ ಲೋಪಗಳನ್ನು ಮಾನ್ಯ ಪ್ರಕಾಶ್‌ರವರು ಎತ್ತಿದ್ದಾರೆ. ಅದರ ಮಧ್ಯೆದಲ್ಲಿ ಮುಖ್ಯ ಮಂತ್ರಿಗಳು ಸಭಾನಾಯಕರಾಗಿದ್ದಾರೆ. ಇದರಲ್ಲಿ ಏನು ಇದೆ ಎನ್ನುವುದರ ಬಗ್ಗೆ ಚರ್ಚೆ ಮಾಡಬೇಕಾದರೆ, ಚರ್ಚೆಗೆ ಸಿದ್ಧವಾಗಿದ್ದರೆ ಎನ್ನುವ ಮಾತನ್ನು ಹೇಳಿದ್ದಾರೆ. ಅದಕ್ಕೆ ನನಗೆ ಮತ್ತೊಮ್ಮೆ ನೀವು ಬೇರೆ ನಿಯಮಗಳಿಗೆ ಹೋಗದೆ ಈಗಾಗಲೇ ಮಾನ್ಯ ಖರ್ಗೆಯವರು 363 ರಲ್ಲಿ ಅನುಮತಿ ಕೊಡಬಹುದೆಂದು ಹೇಳಿದ್ದಾರೆ. ಇವತ್ತು ನಾವು ಏನು ಅಮೇರಿಕಾ ಮತ್ತು ಇಂಗ್ಲೆಂಡ್‌ಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ಹೇಳುತ್ತಿಲ್ಲ. ಇವತ್ತು ರಾಜ್ಯಕ್ಕೆ ಸಂಬಂಧಪಟ್ಟಂಥ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುವುದಕ್ಕೆ ಅನುಮತಿ ಕೊಡಬೇಕೆಂದು ಮತ್ತೊಮ್ಮೆ ಕೇಳಿಕೊಳ್ಳುತ್ತೇನೆ.

ಶ್ರೀ ರಾಜುಗೌಡ ಅಲಗೌಡ ಕಾಗೆ : ಮಾನ್ಯ ಅಧ್ಯಕ್ಷರೆ, ಈ ಬೆಳಗಾವಿಯಲ್ಲಿ ವಿಶೇಷ ಅಧಿವೇಶನ ನಡೆದಿರುವುದರಿಂದ, ಇಲ್ಲಿ ಮುಖ್ಯವಾದ ಒಂದು ನಿರ್ಣಯವನ್ನು ತೆಗೆದುಕೊಳ್ಳುವ ಅವಶ್ಯಕತೆ ಇದೆ. ಬೆಳಗಾವಿ ಸರ್ಕಾರಿ ಮೆಡಿಕಲ್ ಕಾಲೇಜಿಗೆ ಕಿತ್ತೂರು ರಾಣಿ ಚೆನ್ನಮ್ಮ ಎಂದು ಹೆಸರನ್ನು ಇಡಬೇಕೆಂದು ನಾನು ಮಾನ್ಯ ಮುಖ್ಯಮಂತ್ರಿಯವರಲ್ಲಿ ಹಾಗೂ ಉಪಮುಖ್ಯಮಂತ್ರಿಗಳಲ್ಲಿ ವಿನಂತಿಸಿಕೊಳ್ಳುತ್ತೇನೆ.

ಅಧ್ಯಕ್ಷರು : ಮಾನ್ಯ ವಿರೋಧ ಪಕ್ಷದ ನಾಯಕರು ಒಂದು ಪತ್ರವನ್ನು ಕೊಟ್ಟಿದ್ದಾರೆ. ಅದರ ಬಗ್ಗೆ ನಾನು ಪರಿಶೀಲನೆ ಮಾಡಿ ರೂಲಿಂಗ್‌ನ್ನು ಕೊಡುತ್ತೇನೆ. ಸಭೆಯು ಕಾರ್ಯಕಲಾಪಗಳ ಪಟ್ಟಿಯ ಪ್ರಕಾರ ತೆಗೆದುಕೊಳ್ಳೋಣ. ಈಗ ಸಂತಾಪ ಸೂಚನೆಯನ್ನು ತೆಗೆದುಕೊಳ್ಳೋಣ.

3. ಸಂತಾಪ ಸೂಚನೆ.

ವಿಷಯ : ಶ್ರೀ ಎ.ಬಿ. ದೇಸಾಯಿಯವರ ನಿಧನ.

ಅಧ್ಯಕ್ಷರು : ವಿಧಾನಸಭೆಯ ಮಾಜಿ ಸದಸ್ಯರಾಗಿದ್ದ ಶ್ರೀ ಅಲಗೌಡ ಬಸಪ್ರಭು ದೇಸಾಯಿ ಅವರು ನಿಧನ ಹೊಂದಿರುವುದನ್ನು ಈ ಸದನಕ್ಕೆ ಅತ್ಯಂತ ವಿಷಾಧದಿಂದ ತಿಳಿಸಬಯಸುತ್ತೇನೆ.

ಶ್ರೀ ಎ.ಬಿ. ದೇಸಾಯಿ ಅವರು 1939 ನೇ ಫೆಬ್ರವರಿ 1 ರಂದು ಹುಕ್ಕೇರಿ ತಾಲ್ಲೂಕಿನ ಎಲಿಮುನ್ನೋಳಿ ಗ್ರಾಮದಲ್ಲಿ ಜನಿಸಿದ್ದು, ವೃತ್ತಿಯಲ್ಲಿ ಕೃಷಿಕರಾಗಿದ್ದರು. ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದ ಹುಕ್ಕೇರಿ ತಾಲ್ಲೂಕಿನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದು 1983 ರಲ್ಲಿ ಹುಕ್ಕೇರಿ ಕ್ಷೇತ್ರದಿಂದ 7ನೇ ವಿಧಾನಸಭೆಗೆ ಚುನಾಯಿತರಾಗಿದ್ದರು.

ಶ್ರೀಯುತರು ದಿನಾಂಕ: 13.8.2006 ರಂದು ನಿಧನಹೊಂದಿದರು.

ಶ್ರೀ ಹೆಚ್.ಡಿ. ಕುಮಾರಸ್ವಾಮಿ(ಮುಖ್ಯ ಮಂತ್ರಿಗಳು) : ಶ್ರೀ ಎ.ಬಿ. ದೇಸಾಯಿಯವರು 1983 ರಲ್ಲಿ ಹುಕ್ಕೇರಿ ವಿಧಾನಸಭೆಯ ಸದಸ್ಯರಾಗಿ ಹಾಗೂ ಹಲವಾರು ಸಾರ್ವಜನಿಕ ಕ್ಷೇತ್ರದಲ್ಲಿ ಸೇವೆಯನ್ನು ಸಲ್ಲಿಸಿರುವಂಥ ಅವರ ಸೇವೆಯನ್ನು ಈ ಸಂದರ್ಭದಲ್ಲಿ ಸ್ಮರಿಸಿಕೊಳ್ಳುತ್ತೇವೆ. ನಾನು ಅವರ ಆತ್ಮಕ್ಕೆ ಶಾಂತಿಯನ್ನು ಕೋರಲು ಬಯಸುತ್ತೇನೆ. ನಾನು ಈ ಸಂತಾಪ ಸೂಚನೆಯನ್ನು ಬೆಂಬಲಿಸುತ್ತೇನೆ.

ಶ್ರೀ ಎನ್. ಧರ್ಮಸಿಂಗ್ (ವಿರೋಧ ಪಕ್ಷದ ನಾಯಕರು) : ತಾವು ತಂದಿರುವಂಥ ಸಂತಾಪ ಸೂಚನೆಯನ್ನು ಅನುಮೋದಿಸುತ್ತೇನೆ.

ಅಧ್ಯಕ್ಷರು : ಶ್ರೀ. ಎ.ಬಿ. ದೇಸಾಯಿಯವರಿಗೆ ಗೌರವ ಸೂಚಿಸುವ ಸಲುವಾಗಿ ಮಾನ್ಯ ಸದಸ್ಯರೆಲ್ಲರೂ ಎದ್ದು ನಿಂತು ಒಂದು ನಿಮಿಷ ಕಾಲ ಮೌನವಾಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೃತರ ಗೌರವಾರ್ಥ ಸದನದ ಎಲ್ಲಾ ಮಾನ್ಯ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನವನ್ನಾಚರಿಸಿದರು)